# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತನಾಲ್ಕನೆಯ ಅಧಿವೇಶನ

## <u>ಕಾರ್ಯಕಲಾಪಗಳ ಪಟ್ಟಿ</u>

**ಬುಧವಾರ, ದಿನಾಂಕ:18ನೇ ಡಿಸೆಂಬರ್, 2024**

**(ಸಮಯ: ಬೆಳಗ್ಗೆ: 10.30 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎಂಟನೆಯ ಪಟ್ಟಿ

ಆ) **<u>ತಡೆಹಿಡಿಯಲಾದ ಪ್ರಶ್ನೆಗಳು:</u>**

| | |
|---|---|
| 1ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಸುನೀಲ್ ವಲ್ಯಾಪುರ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 08(25) | ಮಾನ್ಯ ಕಂದಾಯ ಸಚಿವರು |
| 7ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ವೈ.ಎಂ. ಸತೀಶ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 103(951) | ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು |
| 7ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಎಸ್. ರವಿ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 105(928) | ಮಾನ್ಯ ಸಹಕಾರ ಸಚಿವರು |
| 7ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಕಿಶೋರ್ ಕುಮಾರ್ ಪುತ್ತೂರ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 104(896) | ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು |

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎಂಟನೆಯ ಪಟ್ಟಿ

## 02. ಶೂನ್ಯವೇಳೆ ಪ್ರಸ್ತಾವಗಳು

## 03. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ಕಾರ್ಯದರ್ಶಿಯವರು:**

**ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಸಭೆಯ ಮುಂದಿಡುವುದು.**

01. ಕರ್ನಾಟಕ ಧನವಿನಿಯೋಗ (ಸಂಖ್ಯೆ–5) ವಿಧೇಯಕ, 2024
02. ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ, 2024
03. ಕರ್ನಾಟಕ (ಖನಿಜ ಹಕ್ಕುಗಳು ಮತ್ತು ಖನಿಜ ಹೊಂದಿರುವ ಭೂಮಿ) ತೆರಿಗೆ ವಿಧೇಯಕ, 2024
04. ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿ (ತಿದ್ದುಪಡಿ) ವಿಧೇಯಕ, 2024

## 04. ಚುನಾವಣಾ ಪ್ರಸ್ತಾವಗಳು

**ಶ್ರೀ ಎನ್.ಎಸ್. ಬೋಸ್‌ರಾಜು (ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು) ಅವರು:–**

ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಸೆನೆಟ್‌ಗೆ ಹಾಗೂ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಪ್ರಶಾಸನ ಸಭೆಗೆ ಚುನಾವಣೆ ನಡೆಸುವ ಬದಲು ಮಾನ್ಯ ಶಾಸಕರುಗಳನ್ನು ನಾಮನಿರ್ದೇಶಿಸಲು ಮಾನ್ಯ ಸಭಾಪತಿಯವರಿಗೆ ಅಧಿಕಾರ ನೀಡುವ ಬಗ್ಗೆ ಪ್ರಸ್ತಾವವನ್ನು ಮಂಡಿಸುವುದು.

## 05. ಶಾಸನ ರಚನೆ

### ಅ) ವಿಧೇಯಕವನ್ನು ಹಿಂಪಡೆಯುವುದು

01. ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ (ತಿದ್ದುಪಡಿ) ವಿಧೇಯಕ, 2024

**ಶ್ರೀ ಸುರೇಶ್ ಬಿ.ಎಸ್ (ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು) ಅವರು:–**

ಅ) "ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ (ತಿದ್ದುಪಡಿ) ವಿಧೇಯಕ, 2024"ನ್ನು ಹಿಂಪಡೆಯಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಹಿಂಪಡೆಯುವುದು.

### ಆ) ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

01. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಎರಡನೇ ತಿದ್ದುಪಡಿ) ವಿಧೇಯಕ, 2024

**ಶ್ರೀ ಡಿ.ಕೆ. ಶಿವಕುಮಾರ್ (ಮಾನ್ಯ ಉಪ ಮುಖ್ಯಮಂತ್ರಿಗಳು) ಅವರು:–**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಎರಡನೇ ತಿದ್ದುಪಡಿ) ವಿಧೇಯಕ, 2024"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

02. ಬಸವನಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2024

**ಶ್ರೀ ಕೃಷ್ಣ ಭೈರೇಗೌಡ (ಮಾನ್ಯ ಕಂದಾಯ ಸಚಿವರು) ಅವರು:–**

ಅ) ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಬಸವನಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

03. ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ, 2024

**ಶ್ರೀ ಪ್ರಿಯಾಂಕ ಖರ್ಗೆ (ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು) ಅವರು:–**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

04. ಕರ್ನಾಟಕ (ಖನಿಜ ಹಕ್ಕುಗಳು ಮತ್ತು ಖನಿಜ ಹೊಂದಿರುವ ಭೂಮಿ) ತೆರಿಗೆ ವಿಧೇಯಕ, 2024

**ಶ್ರೀ ಎಸ್.ಎಸ್. ಮಲ್ಲಿಕಾರ್ಜುನ (ಮಾನ್ಯ ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು) ಅವರು:–**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಕರ್ನಾಟಕ (ಖನಿಜ ಹಕ್ಕುಗಳು ಮತ್ತು ಖನಿಜ ಹೊಂದಿರುವ ಭೂಮಿ) ತೆರಿಗೆ ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

05. ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿ (ತಿದ್ದುಪಡಿ) ವಿಧೇಯಕ, 2024

**ಶ್ರೀ ಸಂತೋಷ್ ಲಾಡ್ (ಮಾನ್ಯ ಕಾರ್ಮಿಕ ಸಚಿವರು) ಅವರು:–**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿ (ತಿದ್ದುಪಡಿ)ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 06. ಮಕ್ಕಳ ಹಕ್ಕುಗಳ ಬಗ್ಗೆ ವಿಶೇಷ ಚರ್ಚೆ

ಮಕ್ಕಳಲ್ಲಿ ಪೌಷ್ಠಿಕಾಂಶ ಕೊರತೆ, ಶಿಕ್ಷಣ ಮತ್ತು ಹದಿ ಹರೆಯದ ಮಕ್ಕಳು ಅನುಭವಿಸುತ್ತಿರುವ ಸವಾಲುಗಳು ಹಾಗೂ ಪರಿಹಾರೋಪಾಯಗಳ ಕುರಿತು ವಿಶೇಷ ಚರ್ಚೆ.

## 07. ಗಮನ ಸೆಳೆಯುವ ಸೂಚನೆಗಳು

೦1. **ಶ್ರೀ ಬಸನಗೌಡ ಬಾದರ್ಲಿ** ಅವರು ಸಿಂಧನೂರು ತಾಲ್ಲೂಕನ್ನು ಜಿಲ್ಲಾ ಕೇಂದ್ರ ಸ್ಥಾನವನ್ನಾಗಿ ಮೇಲ್ದರ್ಜೆಗೇರಿಸಲು ಸಮಿತಿ ರಚಿಸುವ ಕುರಿತು ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

೦2. **ಶ್ರೀ ರಾಮೋಜಿಗೌಡ ಮತ್ತು ಶ್ರೀ ಡಿ.ಟಿ. ಶ್ರೀನಿವಾಸ್(ಡಿ.ಟಿ.ಎಸ್)** ಅವರುಗಳು ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಶೌಚಾಲಯಗಳ ನಿರ್ವಹಣೆಗೆ ಅನುದಾನ ಬಿಡುಗಡೆಯಾಗುತ್ತಿದ್ದರೂ ಶಾಲೆಗಳಲ್ಲಿ ವಿದ್ಯಾರ್ಥಿಗಳಿಂದ ಶೌಚಾಲಯಗಳ ನಿರ್ವಹಣೆ ಮಾಡಿಸುತ್ತಿರುವ ಕುರಿತು ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಗಮನ ಸೆಳೆಯುವುದು.

೦೩. **ಶ್ರೀ ಚಿದಾನಂದ ಎಂ. ಗೌಡ ಮತ್ತು ಶ್ರೀ ಎಸ್.ಎಲ್. ಭೋಜೇಗೌಡ** ಅವರುಗಳು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದವರು(ರಾಯಚೂರು) ಉಚ್ಚ ನ್ಯಾಯಾಲಯ ಹಾಗೂ ಸರ್ಕಾರದ ಆದೇಶಗಳ ಅಡಿಯಲ್ಲಿ ರದ್ದುಪಡಿಸಿರುವ ಪದವಿಯ ಮೂಲ ಅಂಕಪಟ್ಟಿಗಳನ್ನು ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಕಲ್ಯಾಣ ಕರ್ನಾಟಕ ವೃಂದದ ನೇಮಕಾತಿ ಪ್ರಕ್ರಿಯೆಯಲ್ಲಿ ಪರಿಗಣಿಸಿ ಲಿಖಿತ ಪರೀಕ್ಷೆಗೆ ಅವಕಾಶ ಕಲ್ಪಿಸಿರುವ ಕುರಿತು ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು

೦೪. **ಶ್ರೀಮತಿ ಹೇಮಲತಾ ನಾಯಕ್** ಅವರು ಮಾದಿಗ ದಾಸರಿ ಸಮುದಾಯವನ್ನು ರಾಜ್ಯದ ಪರಿಶಿಷ್ಟ ಜಾತಿ ಪಟ್ಟಿಯಲ್ಲಿ ನೋಂದಾಯಿಸದೇ ಇರುವುದರಿಂದ ಸರ್ಕಾರದ ಸೌಲಭ್ಯಗಳಿಂದ ವಂಚಿತವಾಗಿರುವ ಈ ಸಮುದಾಯವನ್ನು ಕರ್ನಾಟಕ ರಾಜ್ಯದಲ್ಲಿ ಪರಿಶಿಷ್ಟ ಜಾತಿ ಪಟ್ಟಿಯಲ್ಲಿ ನೋಂದಾಯಿಸುವ ಸಲುವಾಗಿ ರಾಜ್ಯ ಸರ್ಕಾರದ ವತಿಯಿಂದ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡುವ ಕುರಿತು ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯುವುದು.

೦೫. **ಶ್ರೀ ಸುನೀಲ್‌ಗೌಡ ಪಾಟೀಲ್** ಅವರು ರಾಜ್ಯದ ಎಲ್ಲಾ ಮಹಾನಗರ ಪಾಲಿಕೆಗಳು, ನಗರ ಸಭೆಗಳು, ಪುರ ಸಭೆಗಳು ಹಾಗೂ ಪಟ್ಟಣ್ಣ ಪಂಚಾಯತಿಗಳ ವ್ಯಾಪ್ತಿಯಲ್ಲಿ ಬಹಳ ವರ್ಷಗಳಿಂದ ಆಸ್ತಿ ತೆರಿಗೆ ಪಾವತಿಸದಿರುವವರಿಗೆ ವಿಧಿಸಲಾಗುತ್ತಿರುವ ಬಡ್ಡಿ ಹಾಗೂ ಆಸ್ತಿ ತೆರಿಗೆಯಿಂದ ತೀವ್ರ ಆರ್ಥಿಕ ಹೊರೆಯಾಗಿರುವ ತೆರಿಗೆದಾರರಿಗೆ ಒಂದು ಬಾರಿ ಪರಿಹಾರ(OTS) ಯೋಜನೆಯನ್ನು ಜಾರಿಗೊಳಿಸುವ ಕುರಿತು ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರ ಗಮನ ಸೆಳೆಯುವುದು.

೦೬. **ಶ್ರೀಯುತರುಗಳಾದ ತಿಪ್ಪಣ್ಣಪ್ಪ ಕಮಕನೂರ, ಡಾ: ಡಿ. ತಿಮ್ಮಯ್ಯ, ಹೆಚ್.ಪಿ. ಸುಧಾಮ್ ದಾಸ್ ಹಾಗೂ ಇತರರು** ವಿಧಾನಸೌಧದ ಮುಂದೆ ವಿಶ್ವಗುರು ನಿಜಶರಣ ಅಂಬಿಗರ ಚೌಡಯ್ಯನವರ ಮೂರ್ತಿ ಸ್ಥಾಪನೆ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

೦೭. **ಶ್ರೀ ಸಿ.ಟಿ. ರವಿ** ಅವರು ಸರ್ಕಾರದ ವಿವಿಧ ಇಲಾಖೆಗಳಲ್ಲಿ ಸ್ಥಳ ನಿರೀಕ್ಷಣೆಯಲ್ಲಿರುವ ಅಧಿಕಾರಿ ಮತ್ತು ನೌಕರರಿಗೆ ತಕ್ಷಣ ಸ್ಥಳ ನಿಯುಕ್ತಿಗೊಳಿಸುವ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

೦೮. **ಶ್ರೀ ಐವನ್ ಡಿ'ಸೋಜಾ** ಅವರು ಕೇಂದ್ರ ಮತ್ತು ರಾಜ್ಯ ಸರ್ಕಾರ ಸಾರ್ವಜನಿಕರಿಗೆ ವಿವಿಧ ಪಿಂಚಣಿ ಯೋಜನೆಗಾಗಿ ನಿಗದಿಪಡಿಸಿದ ಮಾನದಂಡಗಳ ವ್ಯವಸ್ಥೆಯಿಂದ ಲಕ್ಷಾಂತರ ಪಿಂಚಣಿ ಅರ್ಹರಿರುವ ಕುಟುಂಬಗಳಿಗೆ ಪಿಂಚಣಿ ಪಡೆಯಲು ಅಸಾಧ್ಯವಾಗಿರುವ ಕುರಿತು ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

೦೯. **ಶ್ರೀ ಮಧು ಜಿ. ಮಾದೇಗೌಡ** ಅವರು ಮಂಡ್ಯ ಜಿಲ್ಲೆಯ ಪ್ರಸಿದ್ಧ ಧಾರ್ಮಿಕ ಕ್ಷೇತ್ರವಾದ ಮೇಲುಕೋಟೆಯಲ್ಲಿ ಮೂಲಸೌಲಭ್ಯವನ್ನು ಕಲ್ಪಿಸುವ ಹಾಗೂ ಅನ್ನದಾಸೋಹ ಆರಂಭಿಸುವ ಕುರಿತು ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ಗಮನ ಸೆಳೆಯುವುದು.

೧೦. **ಶ್ರೀಯುತರುಗಳಾದ ಎಸ್. ರವಿ, ಉಮಾಶ್ರೀ, ಮಂಜುನಾಥ್ ಭಂಡಾರಿ, ಎಂ. ನಾಗರಾಜು, ಹೆಚ್.ಪಿ. ಸುಧಾಮ್ ದಾಸ್ ಹಾಗೂ ಇತರರು** ಸಮಾಜ ಘಾತಕ ವ್ಯಕ್ತಿಗಳು ಹೆಚ್‌ಐವಿ ಪೀಡಿತರ ರಕ್ತವನ್ನು ಆರೋಗ್ಯವಂತರಿಗೆ ಹನಿಟ್ರ್ಯಾಪ್ ಪ್ರಕರಣಗಳಲ್ಲಿ ಇಂಜೆಕ್ಟ್ ಮಾಡುವ ಮೂಲಕ ಹೆಚ್‌ಐವಿ ಸೋಂಕನ್ನು ಪ್ರತಿಷ್ಠಿತ ವ್ಯಕ್ತಿಗಳಿಗೆ ಹರಡಿಸಿ ಸಮಾಜದ ಸ್ವಾಸ್ಥ್ಯವನ್ನು ಹಾಳು ಮಾಡುತ್ತಿರುವ ಕೃತ್ಯವು ಸಾರ್ವಜನಿಕರನ್ನು ಆತಂಕಕ್ಕೀಡು ಮಾಡುತ್ತಿರುವ ಕುರಿತು ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

## 08. ನಿಯಮ 330ರ ಮೇರೆಗೆ

01. **ಶ್ರೀ ಬಿ.ಕೆ. ಹರಿಪ್ರಸಾದ್** ಅವರು ಉಡುಪಿ ಜಿಲ್ಲೆ ಮಲ್ಪೆಯ ಮಹಾಲಕ್ಷ್ಮಿ ಕೋ-ಆಪರೇಟಿವ್ ಬ್ಯಾಂಕಿನಲ್ಲಿ ನಕಲಿ ದಾಖಲೆಗಳನ್ನು ಸೃಷ್ಟಿಸಿ ಅವ್ಯವಹಾರ ಎಸಗಿರುವ ಕುರಿತು ಪ್ರಸ್ತಾಪಿಸುವುದು.

02. **ಶ್ರೀಯುತರುಗಳಾದ ಎಸ್.ಎಲ್. ಭೋಜೇಗೌಡ, ಶರವಣ ಟಿ.ಎ, ಕೆ.ಎ. ತಿಪ್ಪೇಸ್ವಾಮಿ, ಸಿ.ಎನ್. ಮಂಜೇಗೌಡ ಹಾಗೂ ಟಿ.ಎನ್. ಜವರಾಯಿಗೌಡ** ಅವರುಗಳು ಜಿಲ್ಲಾ ಪಂಚಾಯತಿ ಹಾಗೂ ತಾಲ್ಲೂಕು ಪಂಚಾಯತ್ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನಗಳ ಮೀಸಲಾತಿಯನ್ನು ಪ್ರಕಟಿಸಿ ಕ್ಷೇತ್ರ ಪುನರ್ ವಿಂಗಡಣೆ ಮಾಡಿ ಆದ್ಯತೆ ಮೇಲೆ ಜಿಲ್ಲಾ ಪಂಚಾಯಿತಿ ಹಾಗೂ ತಾಲ್ಲೂಕು ಪಂಚಾಯಿತಿಯ ಚುನಾವಣೆಯನ್ನು ನಡೆಸುವ ಕುರಿತು ಪ್ರಸ್ತಾಪಿಸುವುದು.

03. **ಶ್ರೀಯುತರುಗಳಾದ ಮಂಜುನಾಥ್ ಭಂಡಾರಿ, ಶರಣಗೌಡ ಬಯ್ಯಾಪುರ, ಸುನೀಲ್‌ಗೌಡ ಪಾಟೀಲ್ ರಾಜೇಂದ್ರ ರಾಜಣ್ಣ ಹಾಗೂ ಚನ್ನರಾಜ್ ಬಸವರಾಜ್ ಹಟ್ಟಿಹೊಳಿ** ಅವರುಗಳು ಗಾಂಧೀಜಿಯವರ ಗ್ರಾಮ ಸ್ವರಾಜ್ಯದ ಕನಸನ್ನು ನನಸಾಗಿಸಲು ಗ್ರಾಮ ಪಂಚಾಯತಿಗಳು ಗ್ರಾಮ ಸರ್ಕಾರಗಳಾಗಿ, ತಾಲ್ಲೂಕು ಪಂಚಾಯತಿಗಳು ತಾಲ್ಲೂಕು ಸರ್ಕಾರಗಳಾಗಿ, ಜಿಲ್ಲಾ ಪಂಚಾಯತಿಗಳು ಜಿಲ್ಲಾ ಸರ್ಕಾರಗಳಾಗಿ ಕಾರ್ಯನಿರ್ವಹಿಸಲು ಎಲ್ಲಾ ಹಣಕಾಸು ಮತ್ತು ಅಧಿಕಾರಗಳನ್ನು ಹಸ್ತಾಂತರಗೊಳಿಸಲು ಅವಕಾಶ ಕಲ್ಪಿಸಿರುವ ಪಂಚಾಯತ್ ರಾಜ್ ಕಾನೂನನ್ನು ಸಂಪೂರ್ಣವಾಗಿ ಅನುಷ್ಠಾನಗೊಳಿಸುವ ಕುರಿತು ಪ್ರಸ್ತಾಪಿಸುವುದು.

04. **ಶ್ರೀ ಪ್ರಕಾಶ್ ಬಾಬಣ್ಣ ಹುಕ್ಕೇರಿ** ಅವರು ಬೆಳಗಾವಿಯ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಕಟ್ಟಡ ಕಾಮಗಾರಿಗಳು ಪೂರ್ಣಗೊಂಡು ಅಗತ್ಯ ತುರ್ತು ಉಪಕರಣಗಳು ಪೂರೈಕೆಯಾಗಿ ಕೆಲವು ವೈದ್ಯ ಮತ್ತು ಸಿಬ್ಬಂದಿ ಹುದ್ದೆಗಳ ಮಂಜೂರಾತಿ ದೊರೆತಿದ್ದರೂ ಸಹ ಆಸ್ಪತ್ರೆ ಕಾರ್ಯಾರಂಭ ಮಾಡದಿರುವ ಕುರಿತು ಪ್ರಸ್ತಾಪಿಸುವುದು.

## 09. ಉತ್ತರ ಕರ್ನಾಟಕ ಭಾಗದ ಜ್ವಲಂತ ಸಮಸ್ಯೆಗಳ ಬಗ್ಗೆ ವಿಶೇಷ ಚರ್ಚೆ

01. **ಕೃಷ್ಣಾ ಮೇಲ್ದಂಡೆ ಯೋಜನೆ, ಮಹದಾಯಿ, ಕಳಸಾ ಬಂಡೂರಿ ಯೋಜನೆಗಳ ಅನುಷ್ಠಾನದ ಬಗ್ಗೆ**
02. **ಅರಣ್ಯ ಭೂಮಿ ಅತಿಕ್ರಮಣ, ಸಂತ್ರಸ್ತರ ಸಮಸ್ಯೆ ಹಾಗೂ ಪರಿಹಾರೋಪಾಯಗಳು**
03. **ರೈತರು ಎದುರಿಸುತ್ತಿರುವ ಸಮಸ್ಯೆಗಳು ಮತ್ತು ಪರಿಹಾರಗಳು**
04. **ಉದ್ಯೋಗ ಸೃಷ್ಟಿಗೆ ಕೈಗೊಳ್ಳಬೇಕಾಗಿರುವ ಕ್ರಿಯಾ ಯೋಜನೆಗಳು**

## 10. ಅರ್ಧ ಗಂಟೆ ಕಾಲಾವಧಿ ಚರ್ಚೆ

01. ಅತಿಥಿ ಶಿಕ್ಷಕರ/ಉಪನ್ಯಾಸಕರ ವೇತನ ಪರಿಷ್ಕರಣೆ ಮಾಡುವ ಕುರಿತು ದಿನಾಂಕ:09.12.2024ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:02(66)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಡಾ: ಧನಂಜಯ ಸರ್ಜಿ** ಅವರಿಂದ ಅರ್ಧಗಂಟೆ ಕಾಲಾವಧಿ ಚರ್ಚೆ.

೦೨. ಬೆಂಗಳೂರು ಮೆಡಿಕಲ್ ಕಾಲೇಜಿನ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಶುಲ್ಕ ಹೆಚ್ಚಿಸಿರುವುದರ ಕುರಿತು ದಿನಾಂಕ:09.12.2024ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:07(74)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಶರವಣ ಟಿ.ಎ.** ಅವರಿಂದ ಅರ್ಧಗಂಟೆ ಕಾಲಾವಧಿ ಚರ್ಚೆ.

೦೩. ಆಕ್ಸಿಜನ್ ಪ್ಲಾಂಟ್ ವೆಂಟಿಲೇಟರ್‌ಗಳನ್ನು ಹೆಚ್ಚಿಸುವ ಕುರಿತು ದಿನಾಂಕ:09.12.2024ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:14(113)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಡಾ: ಯತೀಂದ್ರ ಎಸ್**. ಅವರಿಂದ ಅರ್ಧಗಂಟೆ ಕಾಲಾವಧಿ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**